ದಿಃ **08-12-2022** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿಯರ ಪರ ವಕೀಲರಾದ ಶ್ರೀ ಎಸ್ ಎಂ ಬಿ ರವರಿಂದಃ

ಸಾಕ್ಷಿಗೆ ಪ್ರತಿವಾದಿಯರ ಪರ ವಕೀಲರು ದಿಃ 30-10-2006 ರಂದು ಆದ ಕ್ರಯ ಕರಾರು ಪತ್ರದ ಧೃಡೀಕೃತ ನಕಲನ್ನು ಮುಖಬಲೆ ಮಾಡಿಸಿದ್ದು ಸಾಕ್ಷಿಯು ಸದರಿ ದಾಖಲೆಯಲ್ಲಿರುವ ತನ್ನ ಭಾವಚಿತ್ರ ಹಾಗೂ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದಾಖಲೆಯನ್ನು ನಿಡಿ-2 ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ವತಃ ಮುಂದುವರೆದು ಪ್ರತಿವಾದಿಯ ಜಮೀನನ್ನು ಪಾಳೆಯಿಂದ ಮಾಡಿದಕ್ಕಾಗಿ ನಿಡಿ-2 ರ ದಾಖಲೆಯನ್ನು ಮಾಡಿಕೊಟ್ಟಿದ್ದ ಎಂದು ನುಡಿಯುತ್ತಾರೆ. ಸದರಿ ಸಂಗತಿಯನ್ನು ನಾನು ಸುಳ್ಳು ಹೇಳುತಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರ ದಾಖಲೆ ಆಗುವ ಸಮಯದಲ್ಲಿ ನಾವು ಉಪನೊಂದಣಾಧಿಕಾರಿಗಳ ಕಚೇರಿಗೆ ಬೆಳಗ್ಗೆ 11.00 ಗಂಟೆಗೆ ನಾನು, ಭೀಮಪ್ಪ ಲಕ್ಕಪ್ಪ ನಾಯಿಕ ಮತ್ತು ಇನ್ನೊಬ್ಬ ನಾಯಿಕ ಎನ್ನುವ ವಕೀಲರು ಬಂದಿರುತ್ತೇವೆ. ದಾವಾ ಆಸ್ತಿಯ ಎಲ್ಲ ಮಾಲೀಕರುಗಳನ್ನು ನಾನು ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಪ್ರತಿವಾದಿ ನಂ.1 ರವರು ತನ್ನ ಪಾಲಿಗೆ ಬಂದ ಜಮೀನು ಕುರಿತು ನನಗೆ ಕ್ರಯ ಕರಾರು ಪತ್ರ ಮಾಡಿಕೊಟ್ಟಿರುತ್ತಾನೆ ಎಂದು ನುಡಿಯುತ್ತಾರೆ. ಪ್ರತಿವಾದಿ ನಂ.1 ರವರಿಗೆ ದಾವಾ ಸ್ವತ್ತಿನ ಕ್ರಯ ಕರಾರು ಪತ್ರ ಮಾಡಿಕೊಡುವ ಯಾವುದೇ ಹಕ್ಕು ಇರಲಿಲ್ಲ ಎಂದರೆ ಸರಿಯಲ್ಲ. ನಾನು ವಾದ ಪತ್ರದಲ್ಲಿ ಮತ್ತು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಸಂಗತಿಗಳು ನಿಜವಿರುವುದಿಲ್ಲ ಎಂದರೆ ಸರಿಯಲ್ಲ.

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

(ರಾಜೀವ ಗೋಳಸಾರ)
ಪ್ರ.ದಿ.&ನ್ಯಾದಂ., ಗೋಕಾಕ.